## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ವೃತ್ತಿ ಶಿಕ್ಷಣ ಕೋರ್ಸುಗಳು (ಜೆ.ಓ.ಸಿ) ಪಿ.ಯು.ಸಿ ಗೆ ತತ್ಸಮಾನವೆಂದು ಪರಿಗಣಿಸುವ ಬಗ್ಗೆ.

**ಓದಲಾಗಿದೆ:**

1. ಶಿಕ್ಷಣ ಇಲಾಖೆಯ ಸುತ್ತೋಲೆ ಸಂಖ್ಯೆ:ಇಡಿ 29 ಟಿವಿಇ 2010, ದಿನಾಂಕ:07.05.2010.
2. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ 147 ಸೇಅನೇ 2014, ದಿನಾಂಕ:27.01.2015.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಿ5(2) ಅ.ಆ.ನೇ-15/204-15, ದಿನಾಂಕ:12.02.2015.
4. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 22 ಕೆಎಸ್ಎಸ್ 2015, ದಿನಾಂಕ:29.10.2015.
5. ಶಿಕ್ಷಣ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಇಡಿ 108 ಟಿವಿಇ 2015, ದಿನಾಂಕ:21.09.2017.
6. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ:27.02.2018.
7. ಸರ್ಕಾರದ ಆದೇಶ ಸಂಖ್ಯೆ: ಇಡಿ 19 ಟಿವಿಇ 2019, ದಿನಾಂಕ:09.07.2019.
8. ಜೆ.ಓ.ಸಿ ಯು ಪಿ.ಯು.ಸಿ ಗೆ ತತ್ಸಮಾನವೆಂದು ಸ್ಪಷ್ಟೀಕರಣದ ಬಗ್ಗೆ ನೀಡಿರುವ ಸಮಿತಿಯ ವರದಿ ದಿನಾಂಕ:24.12.2019.

****

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸುತ್ತೋಲೆಯಲ್ಲಿ 2010-2011ನೇ ಸಾಲಿನಿಂದ ಪ್ರಥಮ ವರ್ಷದ ಜೆ.ಓ.ಸಿ ಕೋರ್ಸುಗಳಿಗೆ ಪ್ರವೇಶ ದಾಖಲಾತಿ ನಿಲುಗಡೆಗೊಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸುತ್ತೋಲೆಯಲ್ಲಿ ಎಸ್.ಎಸ್.ಎಲ್.ಸಿ ನಂತರ ಪದವಿ ಪೂರ್ವ ಶಿಕ್ಷಣಕ್ಕೆ ಬದಲಾಗಿ ಐ.ಟಿ.ಐ ಮತ್ತು ಇತರೆ 03 ವರ್ಷದ ಡಿಪ್ಲೋಮಾ ಕೋರ್ಸನ್ನು ಪದವಿ ಪೂರ್ವ ಶಿಕ್ಷಣಕ್ಕೆ (ಪಿ.ಯು.ಸಿ ಗೆ) ತತ್ಸಮಾನವೆಂದು ನೇಮಕಾತಿಯಲ್ಲಿ ಪರಿಗಣಿಸಬಹುದಾಗಿದೆ. ಮುಕ್ತ ವಿಶ್ವವಿದ್ಯಾಲಯಗಳು ನಡೆಸುವ 10+2 ಪರೀಕ್ಷೆಯನ್ನು ನೇಮಕಾತಿಗೆ ಪರಿಗಣಿಸಬಾರದೆಂದು ಸ್ಪಷ್ಟಪಡಿಸಲಾಗಿದೆ.



Scanned by CamScanner

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ಕರ್ನಾಟಕ ರಾಜ್ಯ ವೃತ್ತಿ ಶಿಕ್ಷಣ ನಿರ್ದೇಶನಾಲಯ ನಡೆಸುವ 02 ವರ್ಷದ (Job Oriented Pre-University Diploma) ಈ ವಿದ್ಯಾರ್ಹತೆಯು ದ್ವಿತೀಯ ದರ್ಜೆ ಸಹಾಯಕ ಹುದ್ದೆಗೆ ನೇಮಕಾತಿಗೆ ಪಿ.ಯು.ಸಿ ತತ್ಸಮಾನವೆಂದು ಪರಿಗಣಿಸಬಹುದಾಗಿದೆಯೇ ಎಂಬ ಬಗ್ಗೆ ಸರ್ಕಾರದ ಸ್ಪಷ್ಟೀಕರಣ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಅನಧಿಕೃತ ಟಿಪ್ಪಣಿಯಲ್ಲಿ ವೃತ್ತಿ ಶಿಕ್ಷಣದ 02 ವರ್ಷದ ಕೋರ್ಸುಗಳು ಪದವಿ ಪೂರ್ವ ಶಿಕ್ಷಣಕ್ಕೆ ತತ್ಸಮಾನವೆಂದು ತಿಳಿಸಿರುವ ವಿದ್ಯಾರ್ಹತೆಯು ಉದ್ಯೋಗ ಪಡೆಯಲು ಪಿ.ಯು.ಸಿ ವಿದ್ಯಾರ್ಹತೆಗೆ ತತ್ಸಮಾನವೇ ಎಂಬ ಅಂಶದ ಬಗ್ಗೆ ಸ್ಪಷ್ಟೀಕರಣ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಅನಧಿಕೃತ ಟಿಪ್ಪಣಿಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಈ ಕೆಳಕಂಡಂತೆ ತಿಳಿಸಲಾಗಿದೆ. "ಮೂರು ವರ್ಷಗಳ ಡಿಪ್ಲೊಮಾ ಅಥವಾ 2 ವರ್ಷಗಳ ಐ.ಟಿ.ಐ. ಕೋರ್ಸ್ ಅಥವಾ 2 ವರ್ಷಗಳ ವೃತ್ತಿ ಶಿಕ್ಷಣ ಜೆ.ಓ.ಸಿ. ಡಿಪ್ಲೊಮಾ ವಿದ್ಯಾರ್ಹತೆ ಹೊಂದಿದವರು ಕೇವಲ ತಾಂತ್ರಿಕವಾಗಿ ಪರಿಣಿತಿ ಪಡೆದು ಯಾವುದೇ ಶೈಕ್ಷಣಿಕ ಅಥವಾ ಭಾಷಾ ವಿಷಯದಲ್ಲಿ ಪರಿಣಿತಿ ಹೊಂದಿರುವುದಿಲ್ಲವಾದ್ದರಿಂದ ಕಛೇರಿಗಳಲ್ಲಿ ಕನ್ನಡದಲ್ಲಿ ವ್ಯವಹರಿಸಲು ಇವರಿಂದ ಕಷ್ಟಸಾಧ್ಯವಾಗುತ್ತದೆ. ಆದ್ದರಿಂದ, ಇಂತಹ ಅಭ್ಯರ್ಥಿಗಳು ಎನ್.ಐ.ಓ.ಎಸ್.ನ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿ.ಗೆ ತತ್ಸಮಾನವೆಂದು ಪರಿಗಣಿಸಲು ಪರಿಶೀಲಿಸಬಹುದು."

ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ಸುತ್ತೋಲೆಯಲ್ಲಿ ಈ ಕೆಳಗಿನಂತೆ ಸ್ಪಷ್ಟ ಪಡಿಸಲಾಗಿದೆ :- ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿ.ಯು.ಸಿ. ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು.

1. ಸಿ.ಬಿ.ಎಸ್.ಇ ಮತ್ತು ಐ.ಎಸ್.ಸಿ. ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ.
2. ಇತರೆ ರಾಜ್ಯದ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ.
3. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್(ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.
4. ಮೂರು ವರ್ಷಗಳ ಡಿಪ್ಲೊಮಾ ಅಥವಾ 2 ವರ್ಷಗಳ ಐ.ಟಿ.ಐ ಕೋರ್ಸ್ ಅಥವಾ 2 ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೊಮಾ (ಜೆ.ಓ.ಸಿ/ಜೆ.ಓ.ಡಿ.ಸಿ/ಜೆ.ಎಲ್.ಡಿ.ಸಿ) ಅಭ್ಯರ್ಥಿಗಳು



Scanned by CamScanner

ಎನ್.ಐ.ಓ.ಎಸ್.ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿ ಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿಯುಸಿಗೆ ತತ್ಸಮಾನವೆಂದು ಪರಿಗಣಿಸಬಹುದು.

ಮೇಲೆ ಓದಲಾದ ಕ್ರಮ ಸಂಖ್ಯೆ (7)ರ ಆದೇಶದಲ್ಲಿ ಜೆ.ಓ.ಸಿ 02 ವರ್ಷದ ಕೋರ್ಸುಗಳು ಪದವಿ ಪೂರ್ವ ಶಿಕ್ಷಣಕ್ಕೆ ತತ್ಸಮಾನವೇ ಎಂಬ ವಿಷಯವನ್ನು ನಿರ್ಧರಿಸುವ ಸಂಬಂಧ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ, ಆದೇಶಿಸಲಾಯಿತು.

ಮೇಲೆ ಓದಲಾದ ಕ್ರಮ ಸಂಖ್ಯೆ (8)ರಲ್ಲಿ ಸಮಿತಿಯು ವಿಸ್ತಾರವಾಗಿ ಚರ್ಚಿಸಿ, ಸಾಧಕ ಬಾಧಕಗಳನ್ನು ಪರಿಗಣಿಸಿ, ಅಭಿಪ್ರಾಯದೊಂದಿಗೆ ದಿನಾಂಕ:24.12.2019ರಂದು ಈ ಕೆಳಕಂಡಂತೆ ಸರ್ಕಾರಕ್ಕೆ ಸಭಾ ನಡವಳಿಯೊಂದಿಗೆ ವರದಿಯನ್ನು ಸಲ್ಲಿಸಲಾಗಿದೆ.

1. ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವ ಹಾಗೂ ಈಗಾಗಲೇ ನೇಮಕಾತಿ ಹೊಂದಿ ಆದೇಶ ನಿರೀಕ್ಷೆಯಲ್ಲಿರುವ ವಿದ್ಯಾರ್ಥಿಗಳಿಗೆ ಜೆ.ಓ.ಸಿ ಯು ಪಿ.ಯು.ಸಿ ಗೆ ತತ್ಸಮಾನವೆಂದು ಪರಿಗಣಿಸುವುದು ಹಾಗೂ ನೇಮಕಾತಿ ಸಂದರ್ಭದಲ್ಲಿ ನಿಗದಿತ ಶೈಕ್ಷಣಿಕ ಅರ್ಹತೆ (10+2) ಆಗಿದ್ದಲ್ಲಿ ಪಿ.ಯು.ಸಿ ಅಥವಾ ಜೆ.ಓ.ಸಿ ಎಂದು ನಮೂದಿಸುವುದು.
2. ಪಿ.ಯು.ಸಿ ಅಥವಾ ಜೆ.ಓ.ಸಿ ಅಂಕಗಳನ್ನು ಪರಿಗಣಿಸದೆ ಕೇವಲ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಪರಿಗಣಿಸಿ ಉದ್ಯೋಗಕ್ಕೆ ಆಯ್ಕೆ ಮಾಡುವುದಾದರೆ ಜೆ.ಓ.ಸಿ ಹಾಗೂ ಪಿ.ಯು.ಸಿ ಯನ್ನು ಕನಿಷ್ಠ ಶೈಕ್ಷಣಿಕ ಅರ್ಹತೆಯಾಗಿ ಪರಿಗಣಿಸಬಹುದು.
3. ಪಿ.ಯು.ಸಿ ಮತ್ತು ಜೆ.ಓ.ಸಿ ಅಂಕಗಳನ್ನು ಆಧರಿಸಿ, ಉದ್ಯೋಗಕ್ಕೆ ಆಯ್ಕೆ ಮಾಡುವ ಸಂದರ್ಭಗಳಲ್ಲಿ ಜೆ.ಓ.ಸಿ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಲ್ಲಿ 9:1 ಅನುಪಾತದಲ್ಲಿ ಉದ್ಯೋಗಕ್ಕೆ ಅವಕಾಶ ಮಾಡಿಕೊಡುವುದು.

ಜೆ.ಓ.ಸಿ 02 ವರ್ಷದ ಕೋರ್ಸುಗಳು ಪದವಿ ಪೂರ್ವ ಶಿಕ್ಷಣಕ್ಕೆ ತತ್ಸಮಾನವೇ ಎಂಬ ವಿಷಯವನ್ನು ನಿರ್ಧರಿಸುವ ಸಂಬಂಧ ಸಮಿತಿಯು ದಿನಾಂಕ:24.12.2019ರಂದು ನೀಡಿದ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡ ತೀರ್ಮಾನ ಕೈಗೊಳ್ಳಲಾಯಿತು.

1. ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವ ಹಾಗೂ ಈಗಾಗಲೇ ನೇಮಕಾತಿ ಹೊಂದಿ ಆದೇಶ ನಿರೀಕ್ಷೆಯಲ್ಲಿರುವ ವಿದ್ಯಾರ್ಥಿಗಳಿಗೆ ಜೆ.ಓ.ಸಿ ಯು ಪಿ.ಯು.ಸಿ ಗೆ ತತ್ಸಮಾನವೆಂದು ಪರಿಗಣಿಸುವುದು.



Scanned by CamScanner

2. ಪಿ.ಯು.ಸಿ ಅಥವಾ ಜೆ.ಓ.ಸಿ ಅಂಕಗಳನ್ನು ಪರಿಗಣಿಸದೆ ಕೇವಲ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಪರಿಗಣಿಸಿ ಉದ್ಯೋಗಕ್ಕೆ ಆಯ್ಕೆ ಮಾಡುವುದಾದರೆ ಜೆ.ಓ.ಸಿ ಯನ್ನು ಪಿ.ಯು.ಸಿ ಗೆ ತತ್ಸಮಾನವೆಂದು ಕನಿಷ್ಠ ಶೈಕ್ಷಣಿಕ ಅರ್ಹತೆಯಾಗಿ ಪರಿಗಣಿಸಬಹುದು.

ಅದರಂತೆ, ಕರ್ನಾಟಕ ರಾಜ್ಯ ವೃತ್ತಿ ಶಿಕ್ಷಣ ಕೋರ್ಸುಗಳು (ಜೆ.ಓ.ಸಿ) ಪಿ.ಯು.ಸಿ ಗೆ ತತ್ಸಮಾನವೆಂದು ಪರಿಗಣಿಸಲು ತೀರ್ಮಾನಿಸಿ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ : ಇಡಿ 19 ಟಿವಿಇ 2019,</u>**

**<u>ಬೆಂಗಳೂರು, ದಿನಾಂಕ:06.08.2021</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ವೃತ್ತಿ ಶಿಕ್ಷಣ ಕೋರ್ಸುಗಳು (ಜೆ.ಓ.ಸಿ) ಪಿ.ಯು.ಸಿ ಗೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.

1. ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವ ಹಾಗೂ ಈಗಾಗಲೇ ನೇಮಕಾತಿ ಹೊಂದಿ ಆದೇಶ ನಿರೀಕ್ಷೆಯಲ್ಲಿರುವ ವಿದ್ಯಾರ್ಥಿಗಳಿಗೆ ಜೆ.ಓ.ಸಿ ಯು ಪಿ.ಯು.ಸಿ ಗೆ ತತ್ಸಮಾನವೆಂದು ಪರಿಗಣಿಸುವುದು.

2. ಪಿ.ಯು.ಸಿ ಅಥವಾ ಜೆ.ಓ.ಸಿ ಅಂಕಗಳನ್ನು ಪರಿಗಣಿಸದೆ ಕೇವಲ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಪರಿಗಣಿಸಿ ಉದ್ಯೋಗಕ್ಕೆ ಆಯ್ಕೆ ಮಾಡುವುದಾದರೆ ಜೆ.ಓ.ಸಿ ಯನ್ನು ಪಿ.ಯು.ಸಿಗೆ ತತ್ಸಮಾನವೆಂದು ಕನಿಷ್ಠ ಶೈಕ್ಷಣಿಕ ಅರ್ಹತೆಯಾಗಿ ಪರಿಗಣಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

6/8/21

(ಶರಣಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ(ಸಾಮಾನ್ಯ)

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ – ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ(ಸಾಮಾನ್ಯ), ಕೊಠಡಿ ಸಂಖ್ಯೆ:627, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

**ಇವರಿಗೆ:–**



Scanned by CamScanner

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
5. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.
6. ನಿರ್ದೇಶಕರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ವೃತ್ತಿ ಶಿಕ್ಷಣ ನಿರ್ದೇಶನಾಲಯ, 3ನೇ ಮಹಡಿ, ಪದವಿ ಪೂರ್ವ ಶಿಕ್ಷಣ ಭವನ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ,ಬೆಂಗಳೂರು-560 012.
8. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ(ಸಚಿವ ಸಂಪುಟ), (ಉಲ್ಲೇಖ: ಸಚಿವ ಸಂಪುಟ ಸಭೆ ಸಂಖ್ಯೆ:10, ಪ್ರಕರಣ ಸಂಖ್ಯೆ:ಸಿ-265/2021, ದಿನಾಂಕ:15.07.2021) ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-1), ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಮಾಹಿತಿ ಕೇಂದ್ರ / ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಸಹಾಯಕರು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ), ಬಹುಮಹಡಿಗಳ ಕಟ್ಟಡ, ಬೆಂಗಳೂರು.

Scanned by CamScanner